# ಗಡಿನಾಡು ಬೇಳಗ್ರಾಮದಲ್ಲಿ ಗ್ರಾಮಲೋಕ ವಿಭಿನ್ನ ಸಾಹಿತ್ಯ ಕಾರ್ಯಕ್ರಮ



**ಮುಂಬಯಿ (ಆರ್‌ಬಿಐ), ಮೇ.22–** ಸಾಹಿತ್ಯ ಅಕಾಡೆಮಿ ನವದೆಹಲಿ ಹಾಗೂ ಕೊಂಕಣಿ ಬರಹಗಾರ ಹಾಗೂ ಕಲಾವಿದರ ಒಕ್ಕೂಟ ಮಂಗಳೂರು ಇವರ ಜಂಟಿ ಆಶ್ರದಲ್ಲಿ ಬದಿಯಡ್ಕ ಪಂಚಾಯತಿನ ಬೇಳ ಗ್ರಾಮದಲ್ಲಿ ಗ್ರಾಮಲೋಕ ವಿಭಿನ್ನ ಸಾಹಿತ್ಯ ಕಾರ್ಯಕ್ರಮ ನಡೆಸಿತು. ಯುವ ಬರಹಗಾರರು ಹಾಗೂ, ನಾಟಕ, ಟಿವಿ ಧಾರವಾಹಿ ನಿರ್ದೇಶಕ ಸ್ಟ್ಯಾನಿ ಬೇಳ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಸಲ್ಪಟ್ಟಿತು. ಸಾಹಿತ್ಯ ಅಕಾಡೆಮಿ ಕೊಂಕಣಿ ವಿಭಾಗದ ಸಂಯೋಜಕ ಮೆಲ್ವಿನ್ ರೊಡ್ರಿಗಸ್ ಸಾಹಿತ್ಯ ಅಕಾಡೆಮಿಯ ಇತಿಹಾಸ ಹಾಗೂ ಕಾರ್ಯಕ್ರಮಗಳ ವಿವರಣೆ ನೀಡಿದರು.

ಯುವಸಾಹಿತಿಗಳಾದ ರಾಜು ಉಕ್ಕಿನಡ್ಕ, ರವಿಕುಮಾರ್ ಕ್ರಾಸ್ತ, ಪರಿಸರ ಹೋರಾಟಗಾರರಾದ ರಾಜು ಕಿದೂರು ವಾಣಿ ಕ್ರಾಸ್ತ ತಮ್ಮ ಸ್ವರಚಿತ ಕವನಗಳನ್ನು ವಾಚಿಸುವುದರೊಂದಿಗೆ ಪರಿಸರ, ಭಾಷೆ ಹಾಗೂ ಸಂಸ್ಕೃತಿಯ ಕುರಿತು ತಮ್ಮ ವಿಚಾರಗಳನ್ನು ಮಂಡಿಸಿದರು. ವಿನ್ಸೆಂಟ್ ಪಿಂಟೊ ವಂದಿಸಿದರು.